ಸಾಕ್ಷಿಯನ್ನು ದಿನಾಂಕ 13.08.2024 ರಂದು ಕರೆಸಿ ಪ್ರಮಾಣೀಕರಿಸಲಾಯ್ತು.

**ಪಾಟೀಸವಾಲುಃ ಆರೋಪಿ ಪರ ಶ್ರೀ.S.G.S. ವಕೀಲರಿಂದ :**

3) ನಾನು ಮತ್ತು ಚಾಸಾ.1 ರವರು ಆತ್ಮೀಯ ಸ್ನೇಹಿತರು ಎಂದರೆ ಸರಿ. ನಾವಿಬ್ಬರೂ ಒಂದೇ ಜನಾಂಗಕ್ಕೆ ಸೇರಿದವರು ಎಂದರೆ ಸರಿ. ಚಾಸಾ.1 ರವರು ಯಾವ ದಿನಾಂಕದಂದು ದೂರನ್ನು ನೀಡಿರುತ್ತಾರೆ ಎಂದರೆ ಗೊತ್ತಿಲ್ಲ. ಪೊಲೀಸರು ನನ್ನ ಹೇಳಿಕೆಯನ್ನು ರಾಜಾಪುರ ಗೇಟ್ ಬಳಿ ಪಡೆದುಕೊಂಡಿರುತ್ತಾರೆ. ಪೊಲೀಸರು ನನ್ನ ಹೇಳಿಕೆಗೆ ಸಹಿಯನ್ನು ಪಡೆದುಕೊಂಡಿರುತ್ತಾರೆ. ಪೊಲೀಸರು ಬರೆದುಕೊಂಡಿರುವ ವಿಚಾರಗಳನ್ನು ನನಗೆ ಓದಿ ಹೇಳಿರುವುದಿಲ್ಲ. ಪೊಲೀಸರು ಒಂದು ಹಾಳೆಯ ಮೇಲೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ.

4) ಆರೋಪಿಗಳ ಮತ್ತು ಚಾಸಾ.1 ರವರ ನಡುವೆ ಯಾವುದೇ ಗಲಾಟೆ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ.1 ರವರ ಹಣೆಗೆ ಹೇಗೆ ಏಟಾಗಿರುತ್ತದೆ ಎಂದು ನಾನು ನೋಡಿಲ್ಲ ಎಂದರೆ ಸಾಕ್ಷಿಯು ಏಟಾದ ನಂತರ ನೋಡಿರುತ್ತೇನೆ ಎಂದು ನುಡಿಯುತ್ತಾರೆ. ಸಾಕ್ಷಿಯು ಆಗ ತಾನು ನಿದ್ದೆ ಮಾಡುತ್ತಿದ್ದುದಾಗಿ ನುಡಿಯುತ್ತಾರೆ.

ಮರುವಿಚಾರಣೆಃ ಇಲ್ಲ.
(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸಾ ಸ ಇ ಎ ಒ

3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ತುಮಕೂರು.

ಸಾಕ್ಷಿಯ ಸಹಿ